# ಕರ್ನಾಟಕ ಸರ್ಕಾರದ ನಡವಳಿಗಳು

42

**ವಿಷಯ:** ಜಲಾನಯನ ಅಭಿವೃದ್ಧಿ ಇಲಾಖೆಯ 2014-15ನೇ ಸಾಲಿನಲ್ಲಿ ಚಾಲ್ತಿಯೋಜನೆಗಳಿಗೆ ಮೊದಲನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ:ಕೃಇ/45/ಕೃಯೋಕಾ/2014, ದಿ:04-04-14.
2. ಸರ್ಕಾರದ ಆದೇಶ ಸಂಖ್ಯೆ. FD 03 TFP 2014, ದಿಃ 04-04-2014.
3. ಜಲಾನಯನ ಅಭಿವೃದ್ಧಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ.ಜಅಇ/ಲೆಕ್ಕ-6/ತ್ರೈಮಾಅಬಿ/2014-15, ದಿ: 19-04-2014.

**ಪ್ರಸ್ತಾವನೆ :**

ಮೇಲೆ ಓದಲಾದ ಉಲ್ಲೇಖ (1) ರಲ್ಲಿ 2013-14ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಯ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2014-15ನೇ ಸಾಲಿನಲ್ಲಿ ಮುಂದುವರೆಸಲು ಸರ್ಕಾರದ ಮಂಜೂರಾತಿ ನೀಡಲಾಗಿರುತ್ತದೆ.

ಮೇಲೆ ಓದಲಾದ ಉಲ್ಲೇಖ (2) ಆದೇಶದನ್ವಯ ರಾಜ್ಯ ಯೋಜನೆಗಳಿಗೆ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಆಡಳಿತ ಇಲಾಖೆಯು ಮೊದಲನೇ ಕಂತನ್ನು ಬಿಡುಗಡೆ ಮಾಡಲು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಅಧಿಕಾರ ಪ್ರತ್ಯಾಯೋಜಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ (3) ರ ಪತ್ರದಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ರವರು 2014-15ನೇ ಸಾಲಿನಲ್ಲಿ ಚಾಲ್ತಿ ಯೋಜನೆಗಳಡಿ ಮುಂದುವರೆಸಲಾಗಿರುವ ಯೋಜನಾ ಕಾರ್ಯಕ್ರಮಗಳಿಗೆ ಮೊದಲನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆ ಮಾಡಲು ಸರ್ಕಾರವನ್ನು ಕೋರಿರುತ್ತಾರೆ.

ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕುಷವಾಗಿ ಪರಿಶೀಲಿಸಿ, 2014-15ನೇ ಸಾಲಿನ ಯೋಜನಾ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಮೊದಲನೇ ತ್ರೈಮಾಸಿಕಕ್ಕೆ ಅನುದಾನ ಬಿಡುಗಡೆ ಮಾಡಲು ತೀರ್ಮಾನಿಸಿದೆ. ಅದಕ್ಕಾಗಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ.ಕೃಇ/55/ಕೃಯೋಕಾ/2014, ಬೆಂಗಳೂರು, ದಿನಾಂಕ: 09-05-2014.

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, 2014-15ನೇ ಸಾಲಿನ ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ ಮುಂದುವರೆಸಲಾದ ರಾಜ್ಯವಲಯದ ಚಾಲ್ತಿ ಯೋಜನೆಗಳ ಅನುಷ್ಠಾನಕ್ಕಾಗಿ ಮೊದಲನೇ ತ್ರೈಮಾಸಿಕಕ್ಕೆ ಈ ಕೆಳಕಂಡ 3 ಯೋಜನಾ ಕಾರ್ಯಕ್ರಮಗಳಿಗೆ ಒಟ್ಟು **ರೂ. 126.1075(ಒಂದು ನೂರಾ ಇಪ್ಪತ್ತಾರು ಲಕ್ಷದ ಹತ್ತು ಸಾವಿರದ ಏಳುನೂರ ಐವತ್ತು ರೂಪಾಯಿಗಳು ಮಾತ್ರ)** ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

..2..

(ಲಕ್ಷ ರೂ.ಗಳಲ್ಲಿ)

| ಕ್ರ. ಸಂ. | ಯೋಜನೆಯ ಹೆಸರು/ ಲೆಕ್ಕ ಶೀರ್ಷಿಕೆ | 2014-15ನೇ ಸಾಲಿನಲ್ಲಿ ಒದಗಿಸಿರುವ ಅನುದಾನ | ಮೊದಲನೇ ತ್ರೈಮಾಸಿಕಕ್ಕೆ ಬಿಡುಗಡೆಗೊಳಿಸಿರುವ ಅನುದಾನ |
|---|---|---|---|
| 1 | ಭೂಸಾರ ಮತ್ತು ಜಲಸಂರಕ್ಷಣೆ ಜಲಾನಯನ ಅಭಿವೃದ್ಧಿ ಇಲಾಖೆ ಜಲಾನಯನ ಅಭಿವೃದ್ಧಿ ನಿರ್ದೇಶನಾಲಯ 2402-00-102-0-15 | 464.43 | 116.1075 |
| 2 | ಜಲಾನಯನ ಅಭಿವೃದ್ಧಿ ತರಬೇತಿ ಕೇಂದ್ರ 2402-00-109-0-02 | 20.00 | 5.00 |
| 3 | ಜಲಾನಯನ ಅಭಿವೃದ್ಧಿ ತರಬೇತಿ ಕೇಂದ್ರ ( ವಿಶೇಷ ಅಭಿವೃದ್ಧಿ ಯೋಜನೆ) 2402-00-800-0-09 | 20.00 | 5.00 |
| | ಒಟ್ಟು | **504.43** | **126.1075** |

ರಾಜ್ಯವಲಯ ಯೋಜನೆಗಳಡಿ ಆಗಿಂದಾಗ್ಗೆ ಹೊರಡಿಸಲಾಗುವ ಮಾರ್ಗಸೂಚಿಗಳನ್ನು ಅನುಸರಿಸಿ ಜಲಾನಯನ ಅಭಿವೃದ್ಧಿ ಆಯುಕ್ತರು ಯೋಜನೆಗಳನ್ನು ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ. ಎಫ್‌ಡಿ 03 ಟಿಎಫ್‌ಪಿ 2014, ದಿನಾಂಕ 04-04-2014 ರ ಆದೇಶದಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ:ಕೃಇ/69 /ಆಂಆಸ/2014, ದಿನಾಂಕ:09/05/2014 ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

ಪ್ರತಿಯನ್ನು:-

1) ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂ: 5398, ಬೆಂಗಳೂರು-01.
3) ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ: 5329, ಬೆಂಗಳೂರು-01.
4) ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
5) ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು
6) ಸರ್ಕಾರದ ಉಪ ಕಾರ್ಯದರ್ಶಿ -1, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು
7) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
8) ಸರ್ಕಾರಧ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ-4), ವಿಧಾನ ಸೌಧ, ಬೆಂಗಳೂರು
9) ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
10) ಜಂಟಿ ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
11) ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು(ಜಲಾನಯನ ಅಭಿವೃದ್ಧಿ ಇಲಾಖೆ ಮೂಲಕ)
12) ಮಾನ್ಯ ಕೃಷಿ ಸಚಿವರು ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
13) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು
14) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಶಾಖೆ.
15) ಶಾಖಾಧಿಕಾರಿ, ಕೃಷಿ ಯೋಜನಾ ಘಟಕ, ಎ ಮತ್ತು ಬಿ, ಕೃಷಿ ಇಲಾಖೆ.
16) ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿಗಳು.